Akashvani: Bangalore
National News In Kannada
08.11.2025 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
***************

ಮುಖ್ಯಾಂಶಗಳು

೧. ನಾಲ್ಕು ಹೊಸ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ಸಂಚಾರಕ್ಕೆ ಹಸಿರು ನಿಶಾನೆ ತೋರಲಿರುವ ಪ್ರಧಾನಿ ನರೇಂದ್ರ ಮೋದಿ

೨. ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದಿನಿಂದ ಅಂಗೋಲಾ, ಬೊಟ್ಸ್‌ವಾನಾ ದೇಶಗಳಿಗೆ ಪ್ರವಾಸ

೩. ಬಿಹಾರ ವಿಧಾನಸಭೆ ಎರಡನೇ ಹಂತದ ಚುನಾವಣೆ; ರಾಜಕೀಯ ಪಕ್ಷಗಳಿಂದ ಬಿರುಸಿನ ಪ್ರಚಾರ

೪. ಟಿ-೨೦ ಕ್ರಿಕೆಟ್ ಸರಣಿ; ೫ನೇ ಪಂದ್ಯದಲ್ಲಿ ಭಾರತ-ಆಸ್ಟ್ರೇಲಿಯಾ ಇಂದು ಮುಖಾಮುಖಿ

**********

ಪ್ರಧಾನಿ ನರೇಂದ್ರ ಮೋದಿ ಇಂದು ನಾಲ್ಕು ಹೊಸ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳಿಗೆ ಹಸಿರು ನಿಶಾನೆ ತೋರಲಿದ್ದಾರೆ. ನೂತನ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳು ಎರ್ನಾಕುಲಂ-ಬೆಂಗಳೂರು ಬನಾರಸ್-ಖಜುರಾಹೊ, ಲಕ್ನೋ-ಸಹಾರನ್‌ಪುರ, ಮತ್ತು ಫಿರೋಜ್‌ಪುರ-ದೆಹಲಿ ಮಾರ್ಗಗಳಲ್ಲಿ ಕಾರ್ಯನಿರ್ವಹಿಸಲಿವೆ. ಈ ರೈಲುಗಳು ಪ್ರಯಾಣದ ಸಮಯವನ್ನು ಕಡಿಮೆ ಮಾಡುತ್ತದೆ, ಪ್ರಾದೇಶಿಕ ಚಲನಶೀಲತೆಯನ್ನು ಹೆಚ್ಚಿಸುತ್ತದೆ, ಪ್ರವಾಸೋದ್ಯಮವನ್ನು ಉತ್ತೇಜಿಸುತ್ತದೆ ಮತ್ತು ದೇಶಾದ್ಯಂತ ಆರ್ಥಿಕ ಚಟುವಟಿಕೆಯನ್ನು ಬೆಂಬಲಿಸುತ್ತದೆ. ಏತನ್ಮಧ್ಯೆ ಈ ಹೊಸ ವಂದೇ ಭಾರತ್ ಏಕ್ಸ್‌ಪ್ರೆಸ್ ರೈಲಿನ ಸ್ವಾಗತ ಸಮಾರಂಭವನ್ನು ಇಂದು ಸಂಜೆ ಬೆಂಗಳೂರಿನ ಕೆಎಸ್‌ಆರ್ ರೈಲ್ವೆ ನಿಲ್ದಾಣದಲ್ಲಿ ಆಯೋಜನೆ ಮಾಡಲಾಗಿದೆ.

**********

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ಅಂಗೋಲಾ ಮತ್ತು ಬೋಕ್ಸ್ವಾನಾ ದೇಶಗಳ ಭೇಟಿಗಾಗಿ ಪ್ರಯಾಣ ಆರಂಭಿಸಲಿದ್ದಾರೆ. ಭಾರತ-ಅಂಗೋಲಾ ನಡುವಿನ ರಾಜತಾಂತ್ರಿಕ ಸಂಬಂಧಗಳ ೪೦ನೇ ವರ್ಷಾಚರಣೆ ಹಿನ್ನೆಲೆಯಲ್ಲಿ ಅಲ್ಲಿನ ರಾಷ್ಟ್ರಪತಿ ಜೊಒ ಮ್ಯಾನೂಯಲ್ ಗಾನ್‌ಕ್ಲವೆಸ್ ಲೋರೆಂಕೊ ಆಹ್ವಾನದ ಮೇರೆಗೆ ರಾಷ್ಟ್ರಪತಿ ಅವರು ಅಂಗೋಲಾಕ್ಕೆ ಭೇಟಿ ನೀಡಲಿದ್ದು, ನಾಳೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಇದೇ ೧೧ ರಂದು ೫೦ನೇ ಸ್ವಾತಂತ್ರ್ಯ ದಿನವನ್ನು ಆಚರಿಸುತ್ತಿರುವ ಅಂಗೋಲಾದ ಸಂಸತ್ ಅನ್ನು ಉದ್ದೇಶಿಸಿ ರಾಷ್ಟ್ರಪತಿ ದ್ರೌಪದಿ ಮುರ್ಮು ಮಾತನಾಡಲಿದ್ದಾರೆ. ತಮ್ಮ ಪ್ರವಾಸದ ಎರಡನೇ ಚರಣದಲ್ಲಿ ರಾಷ್ಟ್ರಪತಿ ಅವರು, ಇದೇ ೧೧ ರಂದು ಬೊಟ್ಸ್‌ವಾನಾಕ್ಕೆ

ತೆರಳಿ ಅಲ್ಲಿನ ರಾಷ್ಟ್ರಪತಿ ದುಮಾ ಬೋಕುನ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಬೊಟ್ಸ್‌ವಾನಾ ರಾಷ್ಟ್ರೀಯ ಅಸಂಬ್ಲಿಯನ್ನು ಉದ್ದೇಶಿಸಿ ಮಾತನಾಡುವ ಕಾರ್ಯಕ್ರಮವಿದೆ.

**********

ಎರಡನೇ ಹಂತದಲ್ಲಿ ಮತದಾನ ನಡೆಯಲಿರುವ ಬಿಹಾರ್ ವಿಧಾನಸಭೆಯ ೧೨೨ ಕ್ಷೇತ್ರಗಳಲ್ಲಿ ವಿವಿಧ ರಾಜಕೀಯ ಪಕ್ಷಗಳ ಮುಖಂಡರು ಭರದ ಪ್ರಚಾರ ನಡೆಸಿದ್ದಾರೆ. ಎನ್‌ಡಿಎ ಹಾಗೂ ಮಹಾಘಟಬಂಧನ್ ಮೈತ್ರಿಕೂಟಗಳ ಹಿರಿಯ ಧುರೀಣರು ಚುನಾವಣೆ ನಡೆಯಲಿರುವ ಜಿಲ್ಲೆಗಳಲ್ಲಿ ವ್ಯಾಪಕ ಪ್ರಚಾರ ನಡೆಸುತ್ತಿದ್ದಾರೆ. ಬಿಜೆಪಿ ಹಿರಿಯ ಧುರೀಣ ಪ್ರಧಾನಮಂತ್ರಿ ನರೇಂದ್ರ ಮೋದಿ ಔರಂಗಾಬಾದ್ ಭಾಬುವಾದಲ್ಲಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಿ, ಎನ್‌ಡಿಎ ಅಭ್ಯರ್ಥಿ ಪರ ಮತಯಾಚಿಸಿದರು. ಔರಂಗಾಬಾದ್‌ನಲ್ಲಿ ಮಾತನಾಡಿದ ಅವರು ಎನ್‌ಡಿಎ ಮೈತ್ರಿಕೂಟದ ಚುನಾವಣಾ ಪ್ರಣಾಳಿಕೆಯಲ್ಲಿ ಬಿಹಾರದ ಜನತೆಗೆ ನಂಬಿಕೆ ಇದೆ. ಎನ್‌ಡಿಎ ಬಿಹಾರ ರಾಜ್ಯವನ್ನು ಅಭಿವೃದ್ಧಿಗೊಳಿಸಬಲ್ಲದು ಎಂದರು. ಕಾಂಗ್ರೆಸ್ ಮತ್ತು ಆರ್‌ಜೆಡಿ ಪಕ್ಷಗಳು ದೂಷಣೆಯ ರಾಜಕೀಯವನ್ನು ಮಾಡುತ್ತಿವೆ ಎಂದು ಆಪಾದಿಸಿದರು. ಬಿಜೆಪಿ ಅಧ್ಯಕ್ಷ ಜೆ.ಪಿ.ನಡ್ಡಾ ಗೋವಿಂದ್‌ಗಂಜ್‌ನಲ್ಲಿ ಚುನಾವಣಾ ರ‍್ಯಾಲಿಯಲ್ಲಿ ಭಾಗವಹಿಸಿ, ಎನ್‌ಡಿಎ ಬಿಹಾರ ರಾಜ್ಯವನ್ನು ಸುಸ್ಥಿರ ಅಭಿವೃದ್ಧಿಗೊಳಿಸಲಿದೆ ಎಂದರು. ಹಿರಿಯ ಬಿಜೆಪಿ ನಾಯಕ ಹಾಗೂ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಪೂರ್ವ ಹಾಗೂ ಪಶ್ಚಿಮ ಚಂಪಾರಣ್ ಜಿಲ್ಲೆಗಳಲ್ಲಿ ಎನ್‌ಡಿಎ ಅಭ್ಯರ್ಥಿ  ಬೆಂಬಲಿಸಿ ಪ್ರಚಾರ ನಡೆಸಿದರು. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಚೆನಾರಿ ರೊಹತಾಸ್‌ಗಳಲ್ಲಿ ರ‍್ಯಾಲಿ ನಡೆಸಿದರು. ಈ ಸಂದರ್ಭದಲ್ಲಿ ಅವರು ಮಾತನಾಡಿ, ನಿತಿಶ್ ಕುಮಾರ್ ಕಳೆದ ೨೦ ವರ್ಷಗಳಿಂದ ಅಧಿಕಾರ ನಡೆಸಿದ್ದರೂ ಜನರು ಉದ್ಯೋಗವಕಾಶಗಳಿಂದ ವಂಚಿತರಾಗಿದ್ದರೆ ಎಂದು ಆಪಾದಿಸಿದರು. ಹಿರಿಯ ಕಾಂಗ್ರೆಸ್ ಧುರೀಣ ರಾಹುಲ್ ಗಾಂಧಿ ಅಮರ್‌ಪುರದಲ್ಲಿ ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಿ, ಈ ಚುನಾವಣೆಯಲ್ಲಿ ಬಿಹಾರದ ಭವಿಷ್ಯವನ್ನು ನಿರ್ಧರಿಸಲಿದೆ ಎಂದರು. ಬಾಗಲ್‌ಪುರ ರ‍್ಯಾಲಿಯಲ್ಲಿ ಮಾತನಾಡಿದ ಅವರು, ರೈತರು, ಕಾರ್ಮಿಕರು, ಸಣ್ಣ ವ್ಯಾಪಾರಸ್ಥರ ಮೇಲೆ ಜಿಎಸ್‌ಟಿ ವಿಧಿಸಲಾಗಿದ್ದು, ಇದು ಜನ ವಿರೋಧಿಯಾಗಿದೆ ಎಂದರು. ಬಂಕಾದಲ್ಲಿಯೂ ರಾಹುಲ್‌ಗಾಂಧಿ ಅವರು ಚುನಾವಣಾ ಪ್ರಚಾರ ನಡೆಸಿ ಮಹಾಘಟಬಂಧನ್ ಅಭ್ಯರ್ಥಿ ಪರ ಮತಯಾಚಿಸಿದರು. ಮಹಾಘಟಬಂಧನ್‌ನ ಮುಖ್ಯಮಂತ್ರಿ ಅಭ್ಯರ್ಥಿ ತೇಜಸ್ವಿ ಪ್ರಸಾದ್ ಯಾದವ್, ಪೂರ್ನಿಯಾ, ಅರಾರಿಯಾ, ಬಾಗಲ್‌ಪುರ್ ಮತ್ತು ಬಂಕಾಗಳಲ್ಲಿ ಹಾಗೂ ಸಮಾಜವಾದಿ ಪಕ್ಷದ ಅಧ್ಯಕ್ಷ ಅಖಿಲೇಶ್ ಯಾದವ್ ನೋಖಾ ಮತ್ತು ರೊಹತಾಸ್‌ಗಳಲ್ಲಿ ಮತಯಾಚನೆ ನಡೆಸಿದರು. ಹಿರಿಯ ಬಿಜೆಪಿ ನಾಯಕ ಕೇಂದ್ರ ಗೃಹ ಸಚಿವ ಅಮಿತ್ ಶಾ ಜಮುಯಿನಲ್ಲಿ ಎನ್‌ಡಿಎ ಅಭ್ಯರ್ಥಿ ಪರ ಚುನಾವಣಾ ಪ್ರಚಾರ ಮಾಡಿ ಪ್ರಸ್ತುತ ಚುನಾವಣೆ ಬಿಹಾರದ ಅಭಿವೃದ್ಧಿಯ ದಿಸೆಯನ್ನು ನಿರ್ಧರಿಸಲಿದೆ ಎಂದರು. ಪೂರ್ವ ಚಂಪಾರಣ್‌ನ ಪಹರ್‌ಪುರದಲ್ಲಿ ಸಾರ್ವಜನಿಕ ಸಭೆ ಉದ್ದೇಶಿಸಿ ಮಾತನಾಡಿದ ಜೆಡಿಯು ಅಧ್ಯಕ್ಷ ಹಾಗೂ ಮುಖ್ಯಮಂತ್ರಿ ನಿತೀಶ್ ಕುಮಾರ್, ಕಳೆದ ೨೦ ವರ್ಷಗಳಲ್ಲಿ ತಮ್ಮ ಸರ್ಕಾರ

ಬಿಹಾರದ ಜನತೆಗೆ ನೀಡಿದ ಭರವಸೆಯನ್ನು ಈಡೇರಿಸಿದೆ. ಜೀವಿಕಾ ಕಾರ್ಯಕ್ರಮದ ಮೂಲಕ ಮಹಿಳೆಯರು ಸ್ವಾವಲಂಬಿಯಾಗುವಂತೆ ವಿಶೇಷ ಪ್ರಯತ್ನ ಮಾಡಲಾಗಿದೆ ಎಂದರು. ಕಾಂಗ್ರೆಸ್ ಧುರೀಣ ರಾಹುಲ್ ಗಾಂಧಿ ಬಂಕಾದಲ್ಲಿ ಮಹಾಘಟಬಂಧನ್ ಅಭ್ಯರ್ಥಿ ಪರ ಮತಯಾಚಿಸಿದರು. ಬಿಹಾರದ ಜನತೆಗೆ ತಮ್ಮ ಅಧಿಕಾರದ ಬಗ್ಗೆ ರಾಜಕೀಯ ಪ್ರಜ್ಞೆ ಇದೆ ಎಂದರು. ಆರ್‌ಜೆಡಿ ನಾಯಕ ತೇಜಸ್ವಿ ಪ್ರಸಾದ್ ಯಾದವ್ ಜೊಕಿಹಾತ್‌ನಲ್ಲಿ ಚುನಾವಣಾ ರ‍್ಯಾಲಿ ಉದ್ದೇಶಿಸಿ ಮಾತನಾಡಿ, ತಮ್ಮ ಮಹಾಘಟಬಂಧನ್ ಅಧಿಕಾರಕ್ಕೆ ಬಂದರೆ ಮಾಯಿ ಬಹಿನ್ ಯೋಜನೆಯಡಿ ಅರ್ಹ ಮಹಿಳೆಯರು ೩೦ ಸಾವಿರ ರೂಪಾಯಿ ಪಡೆಯಲಿದ್ದಾರೆ ಎಂದರು.ಎಲ್‌ಜೆಪಿ-ಆರ್ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಹಾಗೂ ಸಚಿವ ಚಿರಾಗ್ ಪಾಸ್ವಾನ್ ಬಿಹಾರದ ಜನತೆಗೆ ಎನ್‌ಡಿಎ ಮೈತ್ರಿಕೂಟದ ಮೇಲೆ ಅಪಾರ ನಂಬಿಕೆ ಇದೆ ಎಂದರು. ಬಿಹಾರ ವಿಧಾನಸಭಾ ಚುನಾವಣೆಯ ಎರಡನೇ ಹಂತದ ಮತದಾನ ೨೦ ಜಿಲ್ಲೆಗಳ ೧೨೨ ಕ್ಷೇತ್ರಗಳಲ್ಲಿ ಇದೇ ೧೧ ರಂದು ನಡೆಯಲಿದೆ. ಮೊದಲನೇ ಹಂತದ ಚುನಾವಣೆಯಲ್ಲಿ ಶೇಕಡ ೬೪ ಪಾಯಿಂಟ್ ೬೬ ರಷ್ಟು ಮತದಾನವಾಗಿದೆ. ಬಿಹಾರ ವಿಧಾನಸಭೆ ಚುನಾವಣೆಯ ಮತ ಎಣಿಕೆ ಇದೇ ೧೪ ರಂದು ನಡೆಯಲಿದೆ.

**********

ಪ್ರಧಾನಿ ನರೇಂದ್ರ ಮೋದಿ ಇಂದು ಸಂಜೆ ನವದೆಹಲಿಯ ಸುಪ್ರೀಂಕೋರ್ಟ್‌ನಲ್ಲಿ ಕಾನೂನು ನೆರವು ವಿತರಣಾ ಕಾರ್ಯವಿಧಾನಗಳನ್ನು ಬಲಪಡಿಸುವ ಕುರಿತಾದ ರಾಷ್ಟ್ರೀಯ ಸಮ್ಮೇಳನವನ್ನು ಉದ್ಘಾಟಿಸಲಿದ್ದಾರೆ. ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ-ನಾಲ್ಸಾ, ಸಿದ್ಧಪಡಿಸಿದ ಸಮುದಾಯ ಮಧ್ಯಸ್ಥಿಕೆ ತರಬೇತಿ ಮಾಡ್ಯೂಲ್ ಅನ್ನು ಉದ್ಘಾಟಿಸಲಿರುವ ಪ್ರಧಾನಿ, ಈ ಸಂದರ್ಭದಲ್ಲಿ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಎರಡು ದಿನಗಳ ಸಮ್ಮೇಳನವು ಕಾನೂನು ನೆರವು ರಕ್ಷಣಾ ಸಲಹೆಗಾರ ವ್ಯವಸ್ಥೆ, ಪ್ಯಾನಲ್ ವಕೀಲರು, ಪ್ಯಾರಾ-ಲೀಗಲ್ ಸ್ವಯಂಸೇವಕರು, ಶಾಶ್ವತ ಲೋಕ ಅದಾಲತ್‌ಗಳು ಮತ್ತು ಕಾನೂನು ಸೇವಾ ಸಂಸ್ಥೆಗಳ ಹಣಕಾಸು ನಿರ್ವಹಣೆಯಂತಹ ಕಾನೂನು ಸೇವೆಗಳ ಚೌಕಟ್ಟಿನ ಪ್ರಮುಖ ಅಂಶಗಳ ಕುರಿತು ಚರ್ಚಿಸುತ್ತದೆ.

**********

ದೆಹಲಿಯ ಇಂದಿರಾ ಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿರುವ ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರವು ಸ್ವಯಂಚಾಲಿತ ಸಂದೇಶ ಸ್ವಿಚಿಂಗ್ ಸಿಸ್ಟಮ್‌ನಲ್ಲಿನ ತಾಂತ್ರಿಕ ಸಮಸ್ಯೆಯನ್ನು ಪರಿಹರಿಸಿದೆ ಎಂದು ನಾಗರಿಕ ವಿಮಾನಯಾನ ಸಚಿವಾಲಯ ತಿಳಿಸಿದೆ. ಇದು ವಿಮಾನ ಯೋಜನೆ ಸಂದೇಶಗಳನ್ನು ಸಂಸ್ಕರಿಸುವಲ್ಲಿ ವಿಳಂಬಕ್ಕೆ ಕಾರಣವಾಗಿದೆ. ಈ ವ್ಯವಸ್ಥೆಗಳು ಈಗ ಕಾರ್ಯನಿರ್ವಹಿಸುತ್ತಿವೆ. ತಾಂತ್ರಿಕ ಸಮಸ್ಯೆಯಿಂದಾಗಿ ವಿಮಾನ ನಿಲ್ದಾಣದಲ್ಲಿ ಹಲವಾರು ದೇಶೀಯ ಮತ್ತು ಅಂತಾರಾಷ್ಟ್ರೀಯ ವಿಮಾನಗಳು ವಿಳಂಬವಾಗಿದ್ದವು.

**********

ನವದೆಹಲಿಯ ರಾಷ್ಟ್ರೀಯ ವಸ್ತುಸಂಗ್ರಹಾಲಯದಲ್ಲಿ ಪ್ರತಿಷ್ಠಾಪಿಸಲಾಗಿರುವ ಭಗವಾನ್ ಬುದ್ಧನ ಪವಿತ್ರ ಅವಶೇಷಗಳು ಇಂದು ಹನ್ನೊಂದು ದಿನಗಳ ಸಾರ್ವಜನಿಕ ಪ್ರದರ್ಶನಕ್ಕಾಗಿ ಭೂತಾನ್‌ಗೆ ಪ್ರಯಾಣಿಸಲಿವೆ. ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವ ಡಾ. ವೀರೇಂದ್ರ ಕುಮಾರ್ ನಿಯೋಗದ ನೇತೃತ್ವ ವಹಿಸಲಿದ್ದಾರೆ. ಈ ಪ್ರದರ್ಶನವು ಥಿಂಪುವಿನಲ್ಲಿ ನಡೆಯುವ ಜಾಗತಿಕ ಶಾಂತಿ ಪ್ರಾರ್ಥನಾ ಉತ್ಸವದ ಭಾಗವಾಗಿದೆ ಎಂದು ಸಂಸ್ಕೃತಿ ಸಚಿವಾಲಯ ತಿಳಿಸಿದೆ.

**********

ಭಾರತದ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ-ಇಫಿ ೨೦೨೫ ಇದೇ ತಿಂಗಳ ೨೦ರಂದು ಗೋವಾದಲ್ಲಿ ಆರಂಭವಾಗಲಿದೆ. ೮೧ ದೇಶಗಳ ೨೪೦ ಚಿತ್ರಗಳು ಪ್ರದರ್ಶನಗೊಳ್ಳಲಿವೆ. ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಡಾ.ಮುರುಗನ್ ನವದೆಹಲಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿ, ಇವುಗಳಲ್ಲಿ ೫೦ಕ್ಕೂ ಹೆಚ್ಚು ಚಲನಚಿತ್ರಗಳು ಮಹಿಳೆಯರಿಂದ ನಿರ್ದೇಶಿಸಲ್ಪಟ್ಟ ಚಿತ್ರಗಳಾಗಿವೆ ಎಂದರು. ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಸಂಜಯ್ ಜಾಜು ಮಾತನಾಡಿ, ಇದು ದೇಶದ ಸಿನಿಮಾ ವೈವಿಧ್ಯಗಳನ್ನು ಪ್ರದರ್ಶಿಸುವ ಪ್ರಯತ್ನವಾಗಿದೆ. ಚಿತ್ರೋತ್ಸವದಲ್ಲಿ ವಿವಿಧ ರೀತಿಯ ಪ್ರದರ್ಶನಗಳನ್ನು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದು ತಿಳಿಸಿದರು.

**********

ಪ್ರಸ್ತಾವಿತ ಭಾರತ-ಯೂರೋಪಿಯನ್ ಒಕ್ಕೂಟ ಮುಕ್ತ ವ್ಯಾಪಾರ ಒಪ್ಪಂದ ಕುರಿತು ಭಾರತೀಯ ಸಹವರ್ತಿಗಳೊಂದಿಗೆ ಮಾತುಕತೆ ನಡೆಸಲು ಯುರೋಪಿಯನ್ ಒಕ್ಕೂಟದ ಹಿರಿಯ ಸಮಾಲೋಚಕರ ತಂಡವು ನವದೆಹಲಿಗೆ ಭೇಟಿ ನೀಡಿತು. ಇದೇ ತಿಂಗಳ ೩ ರಂದು ಪ್ರಾರಂಭವಾದ ಮಾತುಕತೆಗಳು ನಿನ್ನೆ ಮುಕ್ತಾಯಗೊಂಡವು. ಈ ಅವಧಿಯಲ್ಲಿ, ಸಮಗ್ರ, ಸಮತೋಲಿತ ಮತ್ತು ಪರಸ್ಪರ ಪ್ರಯೋಜನಕಾರಿ ವ್ಯಾಪಾರ ಒಪ್ಪಂದದ ಕಡೆಗೆ ಚರ್ಚೆಗಳು ನಡೆದವು ಎಂದು ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ ತಿಳಿಸಿದೆ. ಈ ಅವಧಿಯಲ್ಲಿ ನಡೆದ ಚರ್ಚೆಗಳು ಸರಕುಗಳು, ಸೇವೆಗಳು, ಹೂಡಿಕೆ, ವ್ಯಾಪಾರ, ಸುಸ್ಥಿರ ಅಭಿವೃದ್ಧಿ, ಮೂಲದ ನಿಯಮಗಳು ಮತ್ತು ತಾಂತ್ರಿಕ ವ್ಯಾಪಾರ ಅಡೆತಡೆಗಳು ಸೇರಿದಂತೆ ವ್ಯಾಪಕ ಶ್ರೇಣಿಯ ಅಧ್ಯಾಯಗಳನ್ನು ಒಳಗೊಂಡಿವೆ.

**********

ಭಾರತ-ಆಸ್ಟ್ರೇಲಿಯಾ ನಡುವಿನ ೫ನೇ ಟಿ-೨೦ ಪುರುಷರ ಕ್ರಿಕೆಟ್ ಪಂದ್ಯ ಇಂದು ಬ್ರಿಸ್‌ಬೆನ್‌ನಲ್ಲಿ ನಡೆಯಲಿದೆ. ಭಾರತೀಯ ಕಾಲಮಾನ ಮಧ್ಯಾಹ್ನ ೧.೪೫ಕ್ಕೆ ಪಂದ್ಯ ಆರಂಭವಾಗಲಿದೆ. ಕರಾರ ಓವನ್‌ನಲ್ಲಿ ನಡೆದ ೪ನೇ ಪಂದ್ಯದಲ್ಲಿ ಆಸ್ಟ್ರೇಲಿಯಾ ವಿರುದ್ಧ ೪೮ ರನ್‌ಗಳ ಜಯ ಗಳಿಸಿರುವ ಭಾರತ ಈ ಸರಣಿಯಲ್ಲಿ ೨-೧ರ ಮುನ್ನಡೆ ಪಡೆದಿದೆ.

**********

ಲಾಸ್ ಏಂಜಲೀಸ್‌ನಲ್ಲಿ ನಡೆಯಲಿರುವ ೨೦೨೮ರ ಒಲಿಂಪಿಕ್ ಕ್ರೀಡಾಕೂಟದಲ್ಲಿ ಪುರುಷ ಮತ್ತು ಮಹಿಳಾ ಟಿ-೨೦ ಕ್ರಿಕೆಟ್ ಮಾದರಿಗಳು ತಲಾ ಆರು ತಂಡಗಳೊಂದಿಗೆ ನಡೆಯಲಿವೆ ಎಂದು ಅಂತರರಾಷ್ಟ್ರೀಯ ಕ್ರಿಕೆಟ್ ಮಂಡಳಿ-ಐಸಿಸಿ ತಿಳಿಸಿದೆ. ಸಂಯೋಜಿತ ವೇಳಾಪಟ್ಟಿಯು ೨೮ ಪಂದ್ಯಗಳನ್ನು ಒಳಗೊಂಡಿರುತ್ತದೆ. ಇದು ಕ್ರೀಡೆಯ ಜಾಗತಿಕ ವಿಸ್ತರಣೆ ಮತ್ತು ಒಂದು ಶತಮಾನದ ನಂತರ ಒಲಿಂಪಿಕ್‌ಗೆ ಕ್ರಿಕೆಟ್‌ನ ಮರುಪ್ರವೇಶದ ಐತಿಹಾಸಿಕ ಮೈಲಿಗಲ್ಲಾಗಲಿದೆ. ೨೦೨೮ರ ಒಲಿಂಪಿಕ್ಸ್‌ನಲ್ಲಿ ಪುರುಷ ಮತ್ತು ಮಹಿಳಾ ವಿಭಾಗಗಳಲ್ಲಿ ಟಿ-೨೦ ಮಾದರಿಯಲ್ಲಿ ಸ್ಪರ್ಧೆಗಳು, ಜುಲೈ ೧೨ ರಿಂದ ೨೯, ೨೦೨೮ ರವರೆಗೆ ನಡೆಯಲಿವೆ. ಎಲ್ಲಾ ಪಂದ್ಯಗಳು ಲಾಸ್ ಏಂಜಲೀಸ್‌ನ ಡೌನ್‌ಟೌನ್‌ನಿಂದ ಸುಮಾರು ೫೦ ಕಿಲೋಮೀಟರ್ ದೂರದಲ್ಲಿರುವ ಪೊಮೊನಾದ ಫೇರ್‌ಗ್ರೌಂಡ್ಸ್‌ನಲ್ಲಿ ನಡೆಯಲಿವೆ. ೨೦೨೮ರ ಲಾಸ್ ಏಂಜಲೀಸ್ ಒಲಿಂಪಿಕ್ಸ್ - ೨೦೨೬ರ ಏಷ್ಯನ್ ಗೇಮ್ಸ್, ೨೦೨೭ರ ಆಫ್ರಿಕನ್ ಗೇಮ್ಸ್, ಮತ್ತು ಪಾನ್‌ಆಮ್ ಗೇಮ್ಸ್‌ಗಳಂತಹ ಕ್ರೀಡಾಕೂಟಗಳಲ್ಲಿ ಕ್ರಿಕೆಟ್ ಭಾಗವಹಿಸಲಿದೆ ಎಂದು ಐಸಿಸಿ ದೃಢಪಡಿಸಿದೆ.

**********